Akashvani: Bangalore
National Bulletin in Kannada
12.12.2025 : 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

- ಮಣಿಪುರದ ಧೈರ್ಯಶಾಲಿ ಮಹಿಳೆಯರಿಗೆ ನೂಪಿ ಲಾಲ್ ಸ್ಮಾರಕದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪುಷ್ಪ ನಮನ
- ಪಶ್ಚಿಮ ಬಂಗಾಳ ಎಸ್‌ಐಆರ್ ಎಣಿಕೆ ನಂತರ ೫೮ ಲಕ್ಷ, ಪಟ್ಟಿಯಿಂದ ಹೊರಗಿಡಬಹುದಾದ ಮತದಾರರ ಪತ್ತೆ
- ಇಂಡಿಗೋ ವಿಮಾನ ವ್ಯತ್ಯಯ ; ನಾಲ್ಕು ಜನ ಫ್ಲೈಟ್ ಇನ್ಸ್‌ಪೆಕ್ಟರ್‌ಗಳನ್ನು ವಜಾಗೊಳಿಸಿದ ಡಿಜಿಸಿಎ
- ೧೯ ವರ್ಷದೊಳಗಿನವರ ಏಷ್ಯಾಕಪ್ ಕ್ರಿಕೆಟ್ ; ವೈಭವ್ ಸೂರ್ಯವಂಶಿ ಆಕರ್ಷಕ ಶತಕ ; ಬೃಹತ್ ಗುರಿಯತ್ತ ಭಾರತ

*********

ಮಣಿಪುರದ ಇಂಫಾಲ್‌ನಲ್ಲಿ ೨೦೨೫ ರ ೮೬ ನೇ ನೂಪಿ ಲಾಲ್ ದಿನಾಚರಣೆಯ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಮಣಿಪುರದ ಧೈರ್ಯಶಾಲಿ ಮಹಿಳೆಯರಿಗೆ ಪುಷ್ಪ ನಮನ ಸಲ್ಲಿಸಿದರು. ಅವರು ಇಂಫಾಲ್‌ನಲ್ಲಿರುವ ನೂಪಿ ಲಾಲ್ ಸ್ಮಾರಕ ಸಂಕೀರ್ಣಕ್ಕೆ ಭೇಟಿ ನೀಡಿ ವೀರ ಮಹಿಳೆಯರಿಗೆ ಗೌರವ ಸಲ್ಲಿಸಿದರು. ಮಣಿಪುರ ರಾಜ್ಯಪಾಲ ಅಜಯ್ ಕುಮಾರ್ ಭಲ್ಲಾ, ಮಾಜಿ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್, ಶಾಸಕರು, ಹಿರಿಯ ಸರ್ಕಾರಿ ಅಧಿಕಾರಿಗಳು ಪುಷ್ಪ ನಮನ ಸಲ್ಲಿಸಿದರು. ಕಾರ್ಯಕ್ರಮದ ಭಾಗವಾಗಿ ನೂಪಿ ಲಾಲ್ ಅವರ ಕುರಿತು ವಿಶೇಷ ನಾಟಕವನ್ನು ಪ್ರದರ್ಶಿಸಲಾಯಿತು. ಇಂಫಾಲ್‌ನಲ್ಲಿ ಬೆಳಿಗ್ಗೆ ಮಹಿಳೆಯರಿಗಾಗಿ ಓಟದ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ರಾಜ್ಯಾದ್ಯಂತ ಹಾಗೂ ಮಣಿಪುರಿಗಳು ನೆಲೆಸಿರುವ ರಾಜ್ಯದ ಹೊರಗೆ ವಿವಿಧ ನಾಗರಿಕ ಸಮಾಜ ಸಂಸ್ಥೆಗಳು ಮತ್ತು ಮಹಿಳಾ ಸಂಘಟನೆಗಳು ಈ ದಿನವನ್ನು ಆಚರಿಸಿದವು.

*********

ಪಶ್ಚಿಮ ಬಂಗಾಳದಲ್ಲಿ ಮೂರು ಹಂತದ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆಯ ಎಣಿಕೆ ಹಂತ ಪೂರ್ಣಗೊಂಡ ನಂತರ, ಭಾರತೀಯ ಚುನಾವಣಾ ಆಯೋಗ ಪ್ರಸ್ತುತ ಮತದಾರರ ಪಟ್ಟಿಯಿಂದ ೫೮ ಲಕ್ಷ ಹೊರಗಿಡಬಹುದಾದ ಮತದಾರರನ್ನು ಗುರುತಿಸಿದೆ. ನಿನ್ನೆ ರಾತ್ರಿಯವರೆಗೆ ಬೂತ್ ಮಟ್ಟದ ಅಧಿಕಾರಿಗಳು ಮತದಾರರಿಂದ ಸಂಗ್ರಹಿಸಿದ ಸರಿಯಾಗಿ ಭರ್ತಿ ಮಾಡಿದ ನಮೂನೆಗಳ ಡಿಜಿಟಲೀಕರಣದ ಆಧಾರದ ಮೇಲೆ, ಮುಖ್ಯ ಚುನಾವಣಾ ಅಧಿಕಾರಿ ಕಚೇರಿಯಿಂದ ಲಭ್ಯವಿರುವ ಅಂಕಿಅಂಶಗಳ ಪ್ರಕಾರ, ಒಟ್ಟು ೫೮ ಲಕ್ಷದ ೮ ಸಾವಿರದ ೨೩೨ ಮತದಾರರನ್ನು ಪಟ್ಟಿಯಿಂದ ಹೊರಗಿಡಬಹುದಾದ ಮತದಾರರು ಎಂದು ಗುರುತಿಸಲಾಗಿದೆ. ಅವರಲ್ಲಿ, ೨೪ ಲಕ್ಷದ ೧೮ ಸಾವಿರದ ೬೯೯ ಮೃತ ಮತದಾರರಾಗಿದ್ದು, ೧೯ ಲಕ್ಷದ ೯೩ ಸಾವಿರದ ೮೭ ಬೇರೆಡೆಗೆ ಸ್ಥಳಾಂತರಗೊಂಡ ಮತದಾರರು ಎಂದು ಗುರುತಿಸಲಾಗಿದ್ದು, ಉಳಿದವರು ನಕಲಿ ಮತದಾರರು, ಅಂದರೆ, ಎರಡು ಸ್ಥಳಗಳಲ್ಲಿ ಹೆಸರುಗಳನ್ನು ಹೊಂದಿರುವ ಮತದಾರರು ಮತ್ತು ಇತರ ಕಾರಣಗಳಿಗಾಗಿ ಹೊರಗಿಡಲು ಸೂಕ್ತವೆಂದು ಕಂಡುಬಂದ ಮತದಾರರಾಗಿದ್ದಾರೆ.

*********

ಭಾರತದ ನಾಗರಿಕ ವಿಮಾನಯಾನ ನಿರ್ದೇಶನಾಲಯ, ಇಂಡಿಗೋದ ಸುರಕ್ಷತೆ ಮತ್ತು ಕಾರ್ಯಾಚರಣೆಯ ಮಾನದಂಡಗಳನ್ನು ಮೇಲ್ವಿಚಾರಣೆ ಮಾಡುವ ಜವಾಬ್ದಾರಿಯನ್ನು ಹೊಂದಿದ್ದ ನಾಲ್ವರು ಫ್ಲೈಟ್ ಇನ್ಸ್‌ಪೆಕ್ಟರ್‌ಗಳನ್ನು ವಜಾಗೊಳಿಸಿದೆ. ಕಳಪೆ ಯೋಜನೆ ಮತ್ತು ಕಠಿಣ ಸುರಕ್ಷತಾ ಮಾನದಂಡಗಳನ್ನು ಪೂರೈಸುವಲ್ಲಿ ವಿಫಲವಾದ ಕಾರಣ ಈ ತಿಂಗಳು ಸಾವಿರಾರು ವಿಮಾನಗಳನ್ನು ರದ್ದುಗೊಳಿಸಿರುವ ವಿಮಾನಯಾನ ಸಂಸ್ಥೆಯಲ್ಲಿ ಬಿಕ್ಕಟ್ಟು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ. ರದ್ದತಿಯಿಂದಾಗಿ ದೇಶಾದ್ಯಂತ ಹಲವು ಪ್ರಯಾಣಿಕರು ಸಿಲುಕಿಕೊಂಡಿದ್ದಾರೆ. ಇಂಡಿಗೋ ಸಿಇಒ ಪೀಟರ್ ಎಲ್ಬರ್ಸ್ ಅವರಿಗೆ ಡಿಜಿಸಿಎ ಪುನಃ ಸಮನ್ಸ್ ಜಾರಿ ಮಾಡಿದ್ದು,  ಇಂದು ಅಧಿಕಾರಿಗಳ ಎದುರು ಹಾಜರಾಗಲಿದ್ದಾರೆ. ಮೂಲಗಳ ಪ್ರಕಾರ, ತಪಾಸಣೆ ಮತ್ತು ಮೇಲ್ವಿಚಾರಣಾ ಕರ್ತವ್ಯಗಳಲ್ಲಿ ನಿರ್ಲಕ್ಷ್ಯ ಕಂಡುಬಂದ ನಂತರ ಡಿಜಿಸಿಎ ಇನ್ಸ್‌ಪೆಕ್ಟರ್‌ಗಳ ವಿರುದ್ಧ ಕ್ರಮ ಕೈಗೊಂಡಿದೆ.

*********

ಭಾರತದ ಚುನಾವಣಾ ಆಯೋಗವು ಉತ್ತರ ಪ್ರದೇಶದಲ್ಲಿ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಗಡುವನ್ನು ೧೫ ದಿನಗಳವರೆಗೆ ವಿಸ್ತರಿಸಿದೆ. ಇದೇ ೨೬ ರವರೆಗೆ ಫಾರ್ಮ್‌ಗಳನ್ನು ಸಲ್ಲಿಸಬಹುದು ಮತ್ತು ಮತದಾರರ ಕರಡು ಪಟ್ಟಿಯ ಪ್ರಕಟಣೆಯು ಇದೇ ೩೧ ರಂದು

ನಡೆಯಲಿದೆ. "ಪರಿಷ್ಕೃತ ದಿನಾಂಕಗಳ ಪ್ರಕಾರ, ಎಣಿಕೆ ಅವಧಿಯನ್ನು ಇದೇ ೧೬ ರವರೆಗೆ ವಿಸ್ತರಿಸಲಾಗಿದೆ ಎಂದು ಮುಖ್ಯ ಚುನಾವಣಾ ಅಧಿಕಾರಿ ನವದೀಪ್ ರಿನ್ವಾ ಹೇಳಿದ್ದಾರೆ. ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸುವ ಅವಧಿಯನ್ನು ಇದೇ ೩೧ ರಿಂದ ಜನವರಿ ೩೦ ೨೦೨೬ ರವರೆಗೆ ನಿಗದಿಪಡಿಸಲಾಗಿದೆ. ಎಣಿಕೆ ನಮೂನೆಗಳು ಮತ್ತು ಹಕ್ಕುಗಳು ಹಾಗೂ ಆಕ್ಷೇಪಣೆಗಳ ವಿಲೇವಾರಿಯ ನಿರ್ಧಾರವನ್ನು ಇದೇ ೩೧ ರಿಂದ ಫೆಬ್ರವರಿ ೨೧, ೨೦೨೬ ರವರೆಗೆ ನೋಟಿಸ್ ಹಂತದಲ್ಲಿ ಮಾಡಲಾಗುತ್ತದೆ. ಉತ್ತರ ಪ್ರದೇಶದ ಮತದಾರರ ಪಟ್ಟಿಯ ಅಂತಿಮ ಪ್ರಕಟಣೆಯು ಫೆಬ್ರವರಿ ೨೮, ೨೦೨೬ ರಂದು ನಡೆಯಲಿದೆ.

*********

ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹ ಸಚಿವ ಶಿವರಾಜ್ ಪಾಟೀಲ್ ಇಂದು ಲಾತೂರ್‌ನಲ್ಲಿ ನಿಧನರಾದರು. ಅವರಿಗೆ ೯೧ ವರ್ಷ ವಯಸ್ಸಾಗಿತ್ತು. ಇಂದು ಬೆಳಿಗ್ಗೆ ೬.೩೦ ಕ್ಕೆ ತಮ್ಮ ನಿವಾಸದಲ್ಲಿ ಪಾಟೀಲ್ ಕೊನೆಯುಸಿರೆಳೆದರು. ಅವರ ಸುದೀರ್ಘ ರಾಜಕೀಯ ಜೀವನದಲ್ಲಿ ಅವರು ಲೋಕಸಭೆಯ ಸ್ಪೀಕರ್ ಮತ್ತು ಕೇಂದ್ರ ಸರ್ಕಾರದಲ್ಲಿ ಪ್ರಮುಖ ಖಾತೆಗಳು ಸೇರಿದಂತೆ ಹಲವಾರು ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದರು. ಅವರು ಲಾತೂರ್ ಕ್ಷೇತ್ರದಿಂದ ಏಳು ಬಾರಿ ಲೋಕಸಭೆಗೆ ಆಯ್ಕೆಯಾಗಿದ್ದರು. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಮತ್ತು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಮಾಜಿ ಕೇಂದ್ರ ಸಚಿವ ಶಿವರಾಜ್ ಪಾಟೀಲ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ರಾಷ್ಟ್ರಪತಿ, ತಮ್ಮ ಸುದೀರ್ಘ ಸಾರ್ವಜನಿಕ ಜೀವನದಲ್ಲಿ, ಹಲವಾರು ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದಾರೆ ಎಂದು ಹೇಳಿದ್ದಾರೆ. ಪಾಟೀಲ್ ಒಬ್ಬ ಅನುಭವಿ ನಾಯಕರಾಗಿದ್ದರು, ಸಾರ್ವಜನಿಕ ಜೀವನದಲ್ಲಿ ಶಾಸಕರು, ಸಂಸದರು, ಮಹಾರಾಷ್ಟ್ರ ವಿಧಾನಸಭೆಯ ಸ್ಪೀಕರ್ ಹಾಗೂ ಲೋಕಸಭೆಯ ಸ್ಪೀಕರ್ ಆಗಿ ಸೇವೆ ಸಲ್ಲಿಸಿದ್ದಾರೆ. ಅವರು ಸಮಾಜದ ಕಲ್ಯಾಣಕ್ಕೆ ಕೊಡುಗೆ ನೀಡುವ ಬಗ್ಗೆ ಉತ್ಸುಕರಾಗಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ಹೇಳಿದರು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ರಾಜ್ಯ ಸಭೆ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಸಂಸದ ಅಶೋಕ್ ಚವಾಣ್, ಸೇರಿದಂತೆ ಹಲವು ಗಣ್ಯರು ಪಾಟೀಲ್ ಅವರ ನಿಧನಕ್ಕೆ ಸಂತಾಪ ಸೂಚಿಸಿದರು. ಶಿವರಾಜ್ ಪಾಟೀಲ್ ಅವರ ಅಂತ್ಯಕ್ರಿಯೆಯನ್ನು ನಾಳೆ ಬೆಳಿಗ್ಗೆ ೧೧ ಗಂಟೆಗೆ ಲಾತೂರ್ ಬಳಿ ನಡೆಯಲಿದೆ.

*********

ಆಂಧ್ರಪ್ರದೇಶದ ಅಲ್ಲೂರಿ ಸೀತಾ ರಾಮರಾಜು ಜಿಲ್ಲೆಯಲ್ಲಿ ಇಂದು ಬೆಳಗಿನ ಜಾವ ಸಂಭವಿಸಿದ ಖಾಸಗಿ ಬಸ್ ಅಪಘಾತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೯ ಕ್ಕೆ ಏರಿದೆ. ಅಪಘಾತದಲ್ಲಿ ಸುಮಾರು ೨೨ ಜನರು ಗಾಯಗೊಂಡಿದ್ದು, ಅಪಘಾತದ ಸಮಯದಲ್ಲಿ ಒಟ್ಟು ೩೫ ಪ್ರಯಾಣಿಕರು ಮತ್ತು ಇಬ್ಬರು ಚಾಲಕರು ಬಸ್‌ನಲ್ಲಿದ್ದರು.  ತುಲಸಿಪಾಕ ಗ್ರಾಮದ ಬಳಿಯ ಚಿಂತೂರು-ಮರೇಡುಮಿಲ್ಲಿ ಘಾಟ್ ರಸ್ತೆಯಲ್ಲಿ ತೆಲಂಗಾಣ ರಾಜ್ಯದ ಕಡೆಗೆ ಬಸ್ ಹೋಗುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಸ್ಥಳೀಯ ನಿವಾಸಿಗಳು ಮತ್ತು ಪೊಲೀಸರು ರಕ್ಷಣೆಗೆ ಬಂದರು ಮತ್ತು ಗಾಯಾಳುಗಳನ್ನು ಚಿಂತೂರು ಪ್ರದೇಶ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಗಂಭೀರವಾಗಿ ಗಾಯಗೊಂಡ ಐದು ಪ್ರಯಾಣಿಕರನ್ನು ಭದ್ರಾಚಲಂ ಸರ್ಕಾರಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪಾಧ್ಯಕ್ಷ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಜೀವಹಾನಿಗೆ ದುಃಖ ವ್ಯಕ್ತಪಡಿಸಿದ್ದಾರೆ ಮತ್ತು ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಪ್ರಧಾನಿ ಮೋದಿ ಅವರು ಪ್ರಧಾನ ಮಂತ್ರಿಗಳ ರಾಷ್ಟ್ರೀಯ ಪರಿಹಾರ ನಿಧಿಯಿಂದ ಮೃತರ ಸಂಬಂಧಿಕರಿಗೆ ಎರಡು ಲಕ್ಷ ರೂಪಾಯಿಗಳ ಪರಿಹಾರವನ್ನು ನೀಡುವುದಾಗಿ ಘೋಷಿಸಿದ್ದಾರೆ. ಗಾಯಾಳುಗಳಿಗೆ ೫೦ ಸಾವಿರ ರೂಪಾಯಿಗಳನ್ನು ನೀಡಲಾಗುವುದು.

ಮಹಾರಾಷ್ಟ್ರ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಮತ್ತು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಕೂಡ ಈ ದುರಂತ ಘಟನೆಯ ಬಗ್ಗೆ ಆಘಾತ ಮತ್ತು ದುಃಖ ವ್ಯಕ್ತಪಡಿಸಿದ್ದಾರೆ.

*********

ಪ್ರಧಾನಿ ನರೇಂದ್ರ ಮೋದಿ ಅವರು ನಟ ರಜನಿಕಾಂತ್ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಅವರಿಗೆ ಶುಭ ಹಾರೈಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ರಜನಿಕಾಂತ್ ಅವರ ಅಭಿನಯವು ಹಲವು ಪೀಳಿಗೆಗಳನ್ನು ಆಕರ್ಷಿಸಿದೆ ಮತ್ತು ವ್ಯಾಪಕ ಮೆಚ್ಚುಗೆಯನ್ನು ಗಳಿಸಿದೆ ಎಂದು ಅವರು ಹೇಳಿದ್ದಾರೆ.

*********

ಎಸಿಸಿ ೧೯ ವರ್ಷದೊಳಗಿನವರ ಏಷ್ಯಾಕಪ್ ೨೦೨೫ ಕ್ರಿಕೆಟ್ ಪಂದ್ಯಾವಳಿಗೆ ದುಬೈನಲ್ಲಿ ಇಂದು ಚಾಲನೆ ದೊರೆತಿದೆ. ದುಬೈನ ಐಸಿಸಿ ಅಕಾಡೆಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಉದ್ಘಾಟನಾ ಪಂದ್ಯದಲ್ಲಿ ಆಯುಷ್ ಮ್ಹಾತ್ರೆ ನೇತೃತ್ವದ ಭಾರತ ಮತ್ತು ಆತಿಥೇಯ ಯುನೈಟೆಡ್ ಅರಬ್ ಎಮಿರೇಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದು, ಯುಎಇ ತಂಡ ಫೀಲ್ಡಿಂಗ್ ಆಯ್ದುಕೊಂಡಿದ್ದು, ಬ್ಯಾಟಿಂಗ್ ಮಾಡುತ್ತಿರುವ ಭಾರತ ತಂಡ ಇತ್ತೀಚಿನ ವರದಿ ಬಂದಾಗ ೩೯.೪

ಓವರ್‌ಗಳಲ್ಲಿ -೩ ವಿಕೆಟ್ ನಷ್ಟಕ್ಕೆ ೩೦೪ ರನ್ ಗಳಿಸಿ ಆಡುತ್ತಿದೆ. ಆಕರ್ಷಕ ಶತಕದೊಂದಿಗೆ ೧೭೧ ರನ್ ಗಳಿಸಿದ ಕಿರಿ ವಯಸ್ಸಿನ ಪ್ರತಿಭೆ ವೈಭವ್ ಸೂರ್ಯವಂಶಿ ತಂಡಕ್ಕೆ ಉತ್ತಮ ಆರಂಭ ನೀಡಿದರು.

*****END ****